ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ

ದಿನಾಂಕ : DATE : 12/3/21

---

**ರಮೇಶ್ ಜಾರಕಿಹೊಳಿಗೆ ಮರಳುವ ನಿರೀಕ್ಷೆ**

**ಬೊಮ್ಮಾಯಿ, ಅಶೋಕ್, ಲಿಂಬಾವಳಿ, ಕತ್ತಿಗೆ ಒಲವು**

# ಜಲಸಂಪನ್ಮೂಲ ಖಾತೆ ಮೇಲೆ ಹಲವರ ಕಣ್ಣು

• **ಶಂಕರ ಪಾಗೋಜಿ**

ಉದ 12/3/21

**ಬೆಂಗಳೂರು:** ಸಿಡಿ ಪ್ರಕರಣದಲ್ಲಿ ಸಿಲುಕಿಕೊಂಡು ಜಲ ಸಂಪನ್ಮೂಲ ಸಚಿವ ಸ್ಥಾನಕ್ಕೆ ರಮೇಶ್ ಜಾರಕಿಹೊಳಿ ರಾಜೀನಾಮೆ ಸಲ್ಲಿಸಿದ ಮೇಲೆ ಈ ಖಾತೆಯ ಮೇಲೆ ಹಲವರು ಕಣ್ಣಿಟ್ಟುಕೊಂಡಿದ್ದಾರೆ. ಆದರೆ, ರಮೇಶ್ ಜಾರಕಿಹೊಳಿ ತಿಂಗಳೊಳಗೆ ಮತ್ತೆ ಅದೇ ಖಾತೆಗೆ ಮರಳುವ ನಿರೀಕ್ಷೆಯಲ್ಲಿದ್ದಾರೆ.

ಉತ್ತರ ಕರ್ನಾಟಕ ಭಾಗದ ನೀರಾವರಿ ಯೋಜನೆಗಳಿಗೆ ಟೆಂಡರ್ ಪ್ರಕ್ರಿಯೆ ಆರಂಭವಾಗಿದೆ. ಹೀಗಾಗಿ, ರಮೇಶ್ ಅವರ ಜಲ ಸಂಪನ್ಮೂಲ ಖಾತೆಯನ್ನು ಅವರ ಸಹೋದರ ಬಾಲಚಂದ್ರ ಜಾರಕಿಹೊಳಿಗೆ ಜಲ ಸಂಪನ್ಮೂಲ ಖಾತೆ ನೀಡಬೇಕೆಂಬ ಒತ್ತಡ ಅವರ ಆಪ್ತ ಶಾಸಕರ ವಲಯದಿಂದ ಕೇಳಿ ಬರುತ್ತಿದೆ. ಈ ಬಗ್ಗೆ ಸಿಎಂ ಮೇಲೆ ಒತ್ತಡ ಹೇರುತ್ತಿದ್ದಾರೆ.

ಆದರೆ, ಸಿಡಿ ಪ್ರಕರಣವನ್ನು ಆದಷ್ಟು ಬೇಗ ಮುಕ್ತಾಯಗೊಳಿಸಿ, ರಮೇಶ್





ಜಾರಕಿಹೊಳಿಯನ್ನೇ ಮತ್ತೆ ಜಲ ಸಂಪನ್ಮೂಲ ಖಾತೆಯಲ್ಲಿ ಕೂಡಿಸಲು ಬಾಲಚಂದ್ರ ಜಾರಕಿಹೊಳಿ ಪ್ರಯತ್ನ ನಡೆಸಿದ್ದಾರೆ ಎಂದು ತಿಳಿದು ಬಂದಿದೆ.

ಗೃಹ ಹಾಗೂ ಕಾನೂನು ಸಚಿವ ಬಸವರಾಜ್ ಬೊಮ್ಮಾಯಿ, ಕಂದಾಯ ಸಚಿವ ಆರ್. ಅಶೋಕ್, ಅರಣ್ಯ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಅರವಿಂದ ಲಿಂಬಾವಳಿ, ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಉಮೇಶ್ ಕತ್ತಿ ಕೂಡ ಜಲ ಸಂಪನ್ಮೂಲ ಖಾತೆ ಬಗ್ಗೆ ಒಲವು ಹೊಂದಿದ್ದಾರೆ ಎನ್ನಲಾಗಿದ್ದು, ಅವಕಾಶ ಕೊಟ್ಟರೆ ನಿಭಾಯಿಸುವ ಇಚ್ಛೆ ಹೊಂದಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ.

ಆದರೆ, ಈ ಬಗ್ಗೆ ಜಾರಕಿಹೊಳಿ ಸಹೋದರರು ಆಕ್ಷೇಪಿಸುವ ಸಾಧ್ಯತೆ ಇರುವುದಕ್ಕೆ ಬಹಿರಂಗವಾಗಿ ಪ್ರಸ್ತಾಪಿಸಲು ಹಿಂದೇಟು ಹಾಕುತ್ತಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ.

**ಸಿಎಂ ತಾಳ್ಮೆಯ ಲೆಕ್ಕಾಚಾರ:** ರಮೇಶ್ ಜಾರಕಿಹೊಳಿ ರಾಜೀನಾಮೆ ನೀಡಿದ್ದರಿಂದ ಜಲ ಸಂಪನ್ಮೂಲ ಖಾತೆ ಮುಖ್ಯಮಂತ್ರಿ ಯಡಿಯೂರಪ್ಪ ಅವರ ಬಳಿ ಇದೆ. ಸದ್ಯ ಸಿಡಿ ಪ್ರಕರಣವನ್ನು ಎಸ್ಐಟಿಗೆ ವಹಿಸಲಾಗಿದೆ. ಇದರಲ್ಲಿ ರಮೇಶ್ ಜಾರಕಿಹೊಳಿ ದೋಷಿಯಲ್ಲ ಎಂಬ ವರದಿ ಬಂದರೆ, ಮತ್ತೆ ಅವರಿಗೇ ಜಲಸಂಪನ್ಮೂಲ ಖಾತೆ ನೀಡಬೇಕಾಗಿ ಬರಬಹುದು.

ಇನ್ನು ಐದು ರಾಜ್ಯಗಳ ವಿಧಾನಸಭೆ ಚುನಾವಣೆ ಮತ್ತು ರಾಜ್ಯದ ನಾಲ್ಕು ಕ್ಷೇತ್ರಗಳ ಉಪ ಚುನಾವಣೆ ನಂತರ ಸಚಿವ ಸ್ಥಾನ ನೀಡಲು ಸಿಎಂ ಮತ್ತು ಬಿಜೆಪಿ ಹೈಕಮಾಂಡ್ ಲೆಕ್ಕಾಚಾರ ಹಾಕಿದೆ ಎನ್ನಲಾಗಿದೆ. ಆದರೆ, ರಾಜ್ಯದಲ್ಲಿನ ಉಪಚುನಾವಣೆ ಘೋಷಣೆಗೂ ಮುನ್ನವೇ ರಮೇಶ್‌ಗೆ ಅಥವಾ ಬಾಲಚಂದ್ರ ಜಾರಕಿಹೊಳಿ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಪಕ್ಷದ ಶಾಸಕರ ಒಂದು ಗುಂಪು ಸಿಎಂ ಮೇಲೆ ಒತ್ತಡ ಹಾಕುತ್ತಿದೆ.

### ಮಾಸಾಂತ್ಯಕ್ಕೆ ಮುಕ್ತಾಯ?

ಜಾರಕಿಹೊಳಿ ಸಹೋದರರು ಸಿಡಿ ಪ್ರಕರಣ ಈ ತಿಂಗಳಾಂತ್ಯದೊಳಗೆ ಮುಕ್ತಾಯವಾಗುವ ನಿರೀಕ್ಷೆಯಲ್ಲಿದ್ದಾರೆ. ಈಗಾಗಲೇ ಸರ್ಕಾರ ಎಸ್ಐಟಿ ರಚನೆ ಮಾಡಿದ್ದು ತಿಂಗಳಾಂತ್ಯದೊಳಗೆ ತನಿಖೆ ಪೂರ್ಣಗೊಳಿಸಿ ವರದಿ ನೀಡುವ ನೀಡುವ ನಿರೀಕ್ಷೆ ಇಟ್ಟುಕೊಂಡಿದ್ದು, ವರದಿ ಬಂದ ನಂತರ ಮತ್ತೆ ರಮೇಶ್ ಜಾರಕಿಹೊಳಿ ಅವರೇ ಜಲ ಸಂಪನ್ಮೂಲ ಸಚಿವರಾಗುತ್ತಾರೆ ಎಂಬ ವಿಶ್ವಾಸವನ್ನು ಅವರ ಆಪ್ತರು ಇಟ್ಟುಕೊಂಡಿದ್ದಾರೆ.